ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಸಾಲ ಮನ್ನಾ ಬಗ್ಗೆ

ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ):-

152 (1235) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಇತ್ತೀಚಿನ ಕೃಷಿ ಸಾಲಮನ್ನಾ ಯೋಜನೆಯಲ್ಲಿ ಪ್ರಾಥಮಿಕ ಸಹಕಾರ ಕೃಷಿ ಹಾಗೂ ಗ್ರಾಮೀಣಾಭಿವೃದ್ಧಿ ಬ್ಯಾಂಕ್‌ಗಳು ನೀಡಿದ ಕೃಷಿ ಆಧಾರಿತ ಸಾಲಗಳನ್ನು ಮನ್ನಾ ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಬ್ಯಾಂಕುಗಳಲ್ಲಿ ವಿವಿಧ ಯೋಜನೆಯಡಿಯಲ್ಲಿ ಸಾಲ ಪಡೆದು ಸುಸ್ಥಿಯಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಇ) ಸದರಿ ಫಲಾನುಭವಿಗಳು ವಿವಿಧ ಯೋಜನೆಯಡಿಯಲ್ಲಿ ಪಡೆದಿರುವ ಸಾಲದ ಅಸಲು ಹಾಗೂ ಬಡ್ಡಿಯ ಮೊತ್ತವೆಷ್ಟು ; (ಯೋಜನೆವಾರು ವಿವರ ನೀಡುವುದು)

(ಈ) ಸದರಿ ಸಹಕಾರಿ ಬ್ಯಾಂಕುಗಳಿಂದ ಪಡೆದಿರುವ ರೈತರ ಅಸಲು ಮತ್ತು ಬಡ್ಡಿಯನ್ನು ಮನ್ನಾ ಮಾಡಲು ಸರ್ಕಾರ ಚಿಂತಿಸುವುದೇ ;

(ಉ) ಹಾಗಾದರೆ, ಯಾವ ಕಾಲಮಿತಿಯಲ್ಲಿ ಯಾವ ಮಾನದಂಡ ಅನುಸರಿಸಿ, ಅಸಲು ಮತ್ತು ಬಡ್ಡಿಯನ್ನು ಮನ್ನಾ ಮಾಡಲಾಗುವುದು ?